A/601016

ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **580**

ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ಸಚಿವರು : ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸಬೇಕಾದ ದಿನಾಂಕ : 17-12-2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ಪರಿಸರ ಸಂರಕ್ಷಣೆಯ ದೃಷ್ಟಿಯಿಂದ ಸಾರ್ವಜನಿಕರು ವಿದ್ಯುತ್ ಚಾಲಿತ ವಾಹನಗಳನ್ನು ಹೆಚ್ಚಾಗಿ ಬಳಸುವ ಅಗತ್ಯತೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು. ವಿದ್ಯುತ್ ಚಾಲಿತ ವಾಹನಗಳು ಇತರೆ ಇಂಧನ ಚಾಲಿತ ವಾಹನಗಳಿಗಿಂತ ಕಡಿಮೆ ಅಥವಾ ಶೂನ್ಯ ಪರಿಸರ ಮಾಲಿನ್ಯ ಉಂಟುಮಾಡುವ ವಾಹನಗಳಾಗಿರುವ ಮೇರೆಗೆ, ಪರಿಸರ ಸಂರಕ್ಷಣೆಯ ದೃಷ್ಟಿಯಿಂದ ಸಾರ್ವಜನಿಕರು ವಿದ್ಯುತ್ ಚಾಲಿತ ವಾಹನಗಳನ್ನು ಹೆಚ್ಚಾಗಿ ಬಳಸುವ ಅಗತ್ಯತೆಯು ಸರ್ಕಾರದ ಗಮನಕ್ಕೆ ಬಂದಿದೆ.
ಆ	ಹಾಗಿದ್ದಲ್ಲಿ, ರಾಜ್ಯದಲ್ಲಿ ವಿದ್ಯುತ್ ಚಾಲಿತ ವಾಹನಗಳ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಬಯಸುವ ಉದ್ದಿಮೆದಾರರಿಗೆ ಪ್ರೋತ್ಸಾಹ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು;	ರಾಜ್ಯದಲ್ಲಿ ವಿದ್ಯುತ್ ಚಾಲಿತ ವಾಹನಗಳ ತಯಾರಿಕೆ ಮತ್ತು ಬ್ಯಾಟರಿ ಉತ್ಪಾದನೆ ಉದ್ಯಮಗಳ ಸ್ಥಾಪನೆಗೆ ಪ್ರೋತ್ಸಾಹ ನೀಡಲು ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಸಿಐ/117/ಎಸ್‌ಪಿಐ/2017, ದಿನಾಂಕ 25.9.2017 ರನ್ವಯ "Karnataka Electric Vehicle and Energy Storage Policy 2017"ನ್ನು ಘೋಷಿಸಿದೆ. ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಸಿಐ/357/ಎಸ್.ಪಿ.ಐ/2020(ಇ), ದಿನಾಂಕ: 01.06.2021 ರಲ್ಲಿ ಇ.ವಿ ಉದ್ಯಮಗಳಿಗೆ ಕೆಲವೊಂದು ಪ್ರೋತ್ಸಾಹನಗಳ ಪ್ರಮಾಣಗಳನ್ನು ಹೆಚ್ಚಿಸಿ ಸದರಿ ನೀತಿಗೆ ತಿದ್ದುಪಡಿ ಆದೇಶವನ್ನು ಹೊರಡಿಸಲಾಗಿದೆ. ಸದರಿ ಪಾಲಿಸಿಯನ್ವಯ ವಿದ್ಯುತ್‌ಚಾಲಿತ ವಾಹನಗಳ ತಯಾರಿಕೆ, ಬ್ಯಾಟರಿ ಉತ್ಪಾದನೆ, ಚಾರ್ಜಿಂಗ್ ಸ್ಟೇಷನ್‌ಗಳ ಸ್ಥಾಪನೆ ಹಾಗೂ ಬ್ಯಾಟರಿ ಸ್ವಾಪಿಂಗ್ ಸ್ಟೇಷನ್‌ಗಳ ಸ್ಥಾಪನೆಗೆ ಉತ್ತೇಜನ ನೀಡಲು ಬಂಡವಾಳ ಹೂಡಿಕೆ ಸಹಾಯಧನ, ಸ್ಟಾಂಪ್ ಶುಲ್ಕ ವಿನಾಯಿತಿ, ವಿದ್ಯುತ್ ತೆರಿಗೆ ವಿನಾಯಿತಿ, ಭೂ ಪರಿವರ್ತನೆ ಶುಲ್ಕ ಹಿಂಪಾವತಿ, ಇ.ಟಿ.ಪಿಗಳಿಗೆ ಸಹಾಯಧನ ಮತ್ತು ಬೃಹತ್ ಮತ್ತು ಮೆಗಾ ಕೈಗಾರಿಕೆಗಳಿಗೆ ವಹಿವಾಟಿನ ಮೇಲೆ ಉತ್ಪಾದನೆ ಆಧಾರಿತ ಸಹಾಯಧನ ನೀಡಲಾಗುವುದು.
ಇ	ವಿದ್ಯುತ್ ಚಾಲಿತ ವಾಹನಗಳನ್ನು ಖರೀದಿಸಿ ಬಳಕೆ ಮಾಡುವ ರಾಜ್ಯದ ಸಾರ್ವಜನಿಕರಿಗೆ ಪ್ರೋತ್ಸಾಹ ನೀಡಲು ಕೈಗೊಂಡಿರುವ ಕ್ರಮಗಳೇನು;	ಕೇಂದ್ರ ಸರ್ಕಾರದ Fame India Phase-II ಯೋಜನೆ ಅಡಿಯಲ್ಲಿ ಭಾರಿ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮಗಳ ಸಚಿವಾಲಯದ ಅಧಿಸೂಚನೆ ಸಂ.ಎಸ್.ಒ.1300(ಇ) ದಿನಾಂಕ: 08-03-2019ರಲ್ಲಿ, ಭಾರತದಾದ್ಯಂತ ಎಲೆಕ್ಟ್ರಿಕ್ ವಾಹನಗಳನ್ನು ಖರೀದಿಸುವವರಿಗೆ ವಾಹನ ತಯಾರಕರ ಮೂಲಕ ಸಹಾಯಧನವನ್ನು ನೀಡಲಾಗುತ್ತದೆ. ಅಧಿಸೂಚನೆ ಸಂಖ್ಯೆ: ಸಾರಿಇ 76 ಸಾಇಪ 2016 ದಿನಾಂಕ:31-03-2016 ರಲ್ಲಿ ಎಲ್ಲಾ ವರ್ಗದ ಎಲೆಕ್ಟ್ರಿಕ್ ವಾಹನಗಳಿಗೆ (ಇ-ಕಾರ್ಟ್ ಹಾಗೂ ಇ-ರಿಕ್ಷಾ

		ವಾಹನಗಳನ್ನೊಳಗೊಂಡಂತೆ) ದಿನಾಂಕ:01-04-2016 ರಿಂದ ಮೋಟಾರು ವಾಹನ ತೆರಿಗೆ ಪಾವತಿಯಿಂದ ವಿನಾಯಿತಿ ನೀಡಿ ಆದೇಶ ಹೊರಡಿಸಲಾಗಿರುತ್ತದೆ. ಅಲ್ಲದೆ, ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ GSR 525 (E) ದಿನಾಂಕ:02-08-2021 ರಲ್ಲಿ ಬ್ಯಾಟರಿ ಚಾಲಿತ ವಾಹನಗಳಿಗೆ ನೋಂದಣಿ ಶುಲ್ಕದಿಂದ ವಿನಾಯಿತಿ ನೀಡಲಾಗಿರುತ್ತದೆ.

ಟಿಡಿ 115 ಟಿಡಿಕ್ಯೂ 2021

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ
ಪಂಗಡಗಳ ಕಲ್ಯಾಣ ಸಚಿವರು.